ಗಂಗಾವತಿ. ಬುಧವಾರ । 16 ಜುಲೈ–2025 । ಸಂಪುಟ–03 । ಸಂಚಿಕೆ–163 । ಪುಟಗಳು–04 । ಬೆಲೆ–3 ರೂಪಾಯಿ

ಗಂಗಾವತಿಯಿಂದ ಹುಬ್ಬಳಿ–ಧಾರವಾಡ, ಗದಗ, ರಾಯಚೂರು, ಬಳ್ಳಾರಿ, ಯಾದಗಿರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಪ್ರಸಾರಗೊಳ್ಳಲಿದೆ

# ತುಂಗಾಕಿರಣ

TUNGA KIRAN

Kannada daily morning

ಕನ್ನಡ ದಿನಪತ್ರಿಕೆ

ಸಂಪಾದಕರು : ಪರಶುರಾಮ   ಉಪಸಂಪಾದಕರು : ಚಂದ್ರಶೇಖರ್ ಈ   ಉಪಸಂಪಾದಕರು: ರಘುನಾಥ ದೇಶಪಾಂಡೆ   ಉಪಸಂಪಾದಕರು: ವೈ. ಮೌನಯ್ಯ ನಾಯಕ

ಶುಭಾಷಿತ



## ಸಿಎಂ ಕುರ್ಚಿ ಗಲಾಟೆ

# ಮರೆಮಾಚಲು ರಾಜಕಾರಣದ ದಾಳ



**ಬೆಂಗಳೂರು:** ಸಿಎಂ ಕುರ್ಚಿ ಗಲಾಟೆ ಮರೆಮಾಚಲು ರಾಜಕಾರಣದ ದಾಳ ಉರುಳಿಸಿರುವುದು ರಾಜ್ಯದ ದುರಂತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರು ಸೋಮವಾರ ವಾಗ್ದಾಳಿ ನಡೆಸಿದ್ದಾರೆ.

ಶಿವಮೊಗ್ಗ ಜಿಲ್ಲೆಯ ಸಾಗರದ ಸಿಗಂದೂರು ಸೇತುವೆ ಉದ್ಘಾಟನೆ ಸಮಾರಂಭಕ್ಕೆ ತಡವಾಗಿ ಆಹ್ವಾನ ನೀಡಿರುವ ಹಿನ್ನೆಲೆಯಲ್ಲಿ ಸಮಾರಂಭದಲ್ಲಿ ಭಾಗವಹಿಸಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿರುವ ಹಿನ್ನೆಲೆಯಲ್ಲಿ ಪ್ರಹ್ಲಾದ್ ಜೋಶಿಯವರು ಕಿಡಿಕಾರಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಶರಾವತಿ ನದಿಯ ಹಿನ್ನೀರಿನಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಅಂಬಾರಗೋಡ್ಲು– ಕಳಸವಳ್ಳಿ– ಸಿಗಂದೂರು ಸೇತುವೆಯ ಲೋಕಾರ್ಪಣೆಯನ್ನು ಶಿವಮೊಗ್ಗದ ಜನ ನಿಜಕ್ಕೂ ಹಬ್ಬದ ಸಂದರ್ಭ ಎಂದೇ ಭಾವಿಸುತ್ತಿದ್ದಾರೆ. ಆದರೆ, ಈ ಸಂದರ್ಭವನ್ನು ರಾಜಕೀಯ ದಾಳವಾಗಿ ಉರುಳಿಸಲು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಿದ್ದರಾಮಯ್ಯ ಮುಂದಾಗಿರುವುದು ನಿಜಕ್ಕೂ ಬೇಸರದ ಸಂಗತಿ ಎಂದು ಹೇಳಿದ್ದಾರೆ.

ಶಿವಮೊಗ್ಗ ಕ್ಷೇತ್ರದ ಲೋಕಸಭಾ ಸದಸ್ಯರಾದ ಬಿವೈ ರಾಘವೇಂದ್ರರವರು ಜುಲೈ 9 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಸಿಗಂದೂರು ಸೇತುವೆ ಉದ್ಘಾಟನೆ ಕಾರ್ಯಕ್ರಮಕ್ಕೆ ಆಹ್ವಾನದ ಜೊತೆ ಪತ್ರವನ್ನು ಬರೆದಿದ್ದಾರೆ. ಅಲ್ಲದೆ, ಸಿಗಂದೂರು ಸೇತುವೆ ಕರ್ನಾಟಕದ ಹೆಮ್ಮೆ, ಜನರಿಗೆ ಅನುಕೂಲ ಹಾಗೂ ಪ್ರವಾಸಿ ಕ್ಷೇತ್ರವಾಗುವ ಕುರಿತು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವ ನಿತಿನ್ ಗಡ್ಕರಿಯವರು ಕೂಡ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಜುಲೈ 11 ರಂದು ಪತ್ರ ಬರೆದು ಆಹ್ವಾನಿಸಿದ್ದಾರೆ.

ರಾಜ್ಯದ ಅಭಿವೃದ್ಧಿಯನ್ನು ಮರೆತ ಕರ್ನಾಟಕದಲ್ಲಿನ ಕಾಂಗ್ರೆಸ್ ಸರ್ಕಾರ, ಇದೀಗ ಸಿಎಂ ಖುರ್ಚಿ ಜಗಳದಲ್ಲಿ ಮುಳುಗಿದೆ. ಕೇಂದ್ರ ಸರ್ಕಾರದ ಅನುದಾನದಲ್ಲಿ ನಿರ್ಮಾಣವಾದ ಸೇತುವೆಯನ್ನು ಸಂಭ್ರಮಿಸುವ ಬದಲು ತನ್ನ ಕುರ್ಚಿ ಉಳಿಸಿಕೊಳ್ಳುವ ಬರದಲ್ಲಿ, ಶಿಷ್ಟಾಚಾರ ನಿಯಮ ಉಲ್ಲಂಘನೆ, ನನ್ನನ್ನು ಆಹ್ವಾನಿಸಿಯೇ ಇಲ್ಲ ಎಂಬ ಸುಳ್ಳು ಹಾಗೂ ಕೆಟ್ಟ ರಾಜಕಾರಣವನ್ನು ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಪಕ್ಷ ಮಾಡುತ್ತಿರುವುದು ರಾಜ್ಯಕ್ಕೆ ಮಾಡುತ್ತಿರುವ ದ್ರೋಹ.

ಕರ್ನಾಟಕದ ಲೋಕೋಪಯೋಗಿ ಸಚಿವರಾದ ಶ್ರೀ ಸತೀಶ್ ಜಾರಕಿಹೊಳಿಯವರ ಜೊತೆ ಈ ಹಿಂದೆಯೇ ಸಂಸದರಾದ ಶ್ರೀ ಬಿವೈ ರಾಘವೇಂದ್ರರವರು ಹಾಗೂ ಅಧಿಕಾರಿಗಳು ಚರ್ಚಿಸಿ, ಉದ್ಘಾಟನೆಯ ಕುರಿತು ಮಾಹಿತಿಯನ್ನು ನೀಡಿದ್ದಾರೆ. ಅಲ್ಲದೆ, ಉದ್ಘಾಟನೆಯ ಕುರಿತು ಮುಖ್ಯಮಂತ್ರಿಗಳಿಗೂ ಮಾಹಿತಿ ರವಾನೆಯಾಗಿದೆ. ಸಿಎಂ ಕುರ್ಚಿ ಗಲಾಟೆಯನ್ನು ಮರೆಮಾಚಲು ಈ ರೀತಿಯ ರಾಜಕಾರಣದ ದಾಳ ಉರುಳಿಸಿರುವುದು, ರಾಜ್ಯದ ದುರಂತ ಎಂದು ಕಿಡಿಕಾರಿದ್ದಾರೆ.

## ಬಳ್ಳಾರಿ: ಯಶಸ್ವಿಯಾಗಿ ನಡೆದ ರಾಷ್ಟ್ರೀಯ ಲೋಕ್–ಅದಾಲತ್

**ಬಳ್ಳಾರಿ:** ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ 31 ನ್ಯಾಯಾಲಯಗಳಲ್ಲಿ ನಡೆದ ರಾಷ್ಟ್ರೀಯ ಲೋಕ್–ಅದಾಲತ್ ಯಶಸ್ವಿಯಾಗಿ ನಡೆದಿವೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್.ಎನ್ ಹೊಸಮನೆ ಅವರು ತಿಳಿಸಿದ್ದಾರೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರ ಮಾರ್ಗದರ್ಶನ ಹಾಗೂ ನೇತೃತ್ವದಲ್ಲಿ ಜಿಲ್ಲೆಯ ಎಲ್ಲಾ ನ್ಯಾಯಾಧೀಶರ, ವಕೀಲರ, ಕಕ್ಷಿದಾರರ, ಸಾರ್ವಜನಿಕರ ಮತ್ತು ಸರ್ಕಾರಿ ಅಧಿಕಾರಿಗಳ ಸಹಯೋಗದಲ್ಲಿ ರಾಷ್ಟ್ರೀಯ ಲೋಕ್–ಅದಾಲತ್ ಯಶಸ್ವಿಯಾಗಿ ನಡೆದಿವೆ.

ಲೋಕ್–ಅದಾಲತ್‌ನಲ್ಲಿ ರಾಜಿ ಆಗಬಹುದಾದ ಕ್ರಿಮಿನಲ್ ಪ್ರಕರಣಗಳು, ಬ್ಯಾಂಕ್ ದಾವೆಗಳು, ಚೆಕ್ ಬೌನ್ಸ್ ಪ್ರಕರಣಗಳು, ಹಣ ವಸೂಲಾತಿ ದಾವೆಗಳು, ಮೋಟರ್ ಅಪಘಾತ ಪರಿಹಾರ ಪ್ರಕರಣಗಳು, ನೌಕರರ ಪರಿಹಾರ ಪ್ರಕರಣಗಳು, ವಿದ್ಯುತ್ ಶಕ್ತಿ ಕಾಯ್ದೆಯ ಪ್ರಕರಣಗಳು, ಪಾಲು ವಿಭಾಗ ದಾವೆಗಳು, ವೈವಾಹಿಕ ಅಥವಾ ಕೌಟುಂಬಿಕ ಪ್ರಕರಣಗಳು, ಮೋಟಾರ್ ವಾಹನ ಪ್ರಕರಣಗಳು, ಸಿವಿಲ್ ಪ್ರಕರಣಗಳು ಹಾಗೂ ಇತರೆ ರಾಜಿಯಾಗಬಹುದಾದ ಪ್ರಕರಣಗಳನ್ನು ಪರಸ್ಪರ ಒಪ್ಪಿಗೆಯ ಮೇರೆಗೆ ರಾಜಿ ಸಂಧಾನದ ಮೂಲಕ ತೀರ್ಮಾನಿಸಲಾಗಿದೆ.

ಇದರಿಂದ ಕಕ್ಷಿದಾರರಲ್ಲಿ ಪರಸ್ಪರ ಬಾಂಧವ್ಯ ಮುಂದುವರೆದು, ಹಣ ಮತ್ತು ಸಮಯ ಉಳಿತಾಯವಾಗುತ್ತವೆ ಹಾಗೂ ಸಮಾಜದಲ್ಲಿ ಶಾಂತಿಯ ವಾತಾವರಣ ನಿರ್ಮಾಣವಾಗುತ್ತದೆ. ಸಾಮರಸ್ಯ ಜೀವನ ಹಾಗೂ ಸಹಬಾಳ್ವೆ ನಡೆಸಲು ಸಹಾಯವಾಗುತ್ತದೆ.

*ರಾಷ್ಟ್ರೀಯ ಲೋಕ್–ಅದಾಲತ್‌ನ ಸಂಕ್ಷಿಪ್ತ ವರದಿ:*

2025 ನೇ ಸಾಲಿನ ಜು.12 ರಂದು ನಡೆದ ಲೋಕ್–ಅದಾಲತ್‌ನಲ್ಲಿ 16,424 ಬಾಕಿ ಪ್ರಕರಣಗಳು ಮುಕ್ತಾಯಗೊಳಿಸಲಾಗಿದ್ದು, ಒಟ್ಟು ರೂ.34,31,97,228 ಪರಿಹಾರವಾಗಿ ಮೊತ್ತವನ್ನು ಕೊಡಲಾಗಿರುತ್ತದೆ. ಹಾಗೂ 8,59,362 ವಾಜ್ಯಪೂರ್ವ ಪ್ರಕರಣಗಳು ಮುಕ್ತಾಯಗೊಂಡಿದ್ದು, ಅವುಗಳಿಂದ ರೂ.31,33,76,853 ಬ್ಯಾಂಕ್ ಮತ್ತು ಸರ್ಕಾರಿ ಇಲಾಖೆಯ ಖಾಜನೆಗೆ ಪರಿಹಾರದ ಮೊತ್ತ ಜಮೆ ಆಗಿರುತ್ತದೆ.

ಕೌಟುಂಬಿಕ ಸಮಸ್ಯೆಯ ಪ್ರಕರಣಗಳಲ್ಲಿ 11 ಜೋಡಿಗಳು ರಾಜಿ ಸಂದಾನದ ಮೂಲಕ ಗಂಡ–ಹೆಂಡತಿ ಒಂದಾಗಿದ್ದಾರೆ.

ಲೋಕ್–ಅದಾಲತ್ ಕುರಿತು ಸಾರ್ವಜನಿಕರು ಹೆಚ್ಚಿನ ಅರಿವು ಹೊಂದಿ, ತಮ್ಮ ವ್ಯಾಜ್ಯಗಳಿದ್ದಲ್ಲಿ ಸಕಾಲದಲ್ಲಿ ಬಗೆಹರಿಸಿಕೊಳ್ಳಲು ರಾಷ್ಟ್ರೀಯ ಲೋಕ್–ಅದಾಲತ್ ಸಹಕಾರಿಯಾಗಿದೆ ಹಾಗೂ ಪ್ರದಿನ ಎಲ್ಲಾ ನ್ಯಾಯಾಲಯಗಳಲ್ಲಿ ರಾಜಿ ಸಂಧಾನ ಮಾಡುವ ಸಲುವಾಗಿ ಬೈಠಕ್‌ಗಳು ನಡೆಯುತ್ತವೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.





ಕೊಪ್ಪಳ: ಪತ್ತಕರ್ತ ಹಾಗು ಹಿರಿಯ ರಂಗ ಕರ್ಮಿಗಳಾದ ನಾಗರಾಜ್ ಇಂಗಳಗಿ, ಬಸವರಾಜ್ ಹೆಸರೂರು ಕವಲೂರು ಹಾಗು ಹಾಲಯ್ಯ ಹುಡೇಜಾಲಿ ಇವರಿಗೆ ಸಿಜಿಕೆ ರಂಗಪುರಸ್ಕಾರ ನೀಡಿ ಗೌರವಿಸಲಾಯಿತು. ನಾಟಕ ಅಕಾಡೆಮಿ ಸದಸ್ಯ ಚಾಂದ ಪಾಶಾ ಕಿಲ್ಲೆದಾರ್, ಹಿರಿಯ ಪತ್ರಕರ್ತ ನಾರಾಯಣರಾವ್ ಕುಲಕರ್ಣಿ,ಕೊಪ್ಪಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಜಿ.ಸುರೇಶ್ ಹಾಗು ಅಲ್ಲಾಭಕ್ಷಿ ಇದ್ದರು.

## ಪತ್ರಕರ್ತರ ಅಂತಃಸತ್ವ ಶಕ್ತಿಯೇ ಬರಹ, ಕರ್ನಾಟಕ ಪ್ರೆಸ್ ಕ್ಲಬ್ ವತಿಯಿಂದ ಪತ್ರಿಕಾ ದಿನಾಚರಣೆ



ಕೊಟ್ಟೂರು: ಪತ್ರಕರ್ತರ ಅಂತಃಸತ್ವ ಶಕ್ತಿಯೇ ಬರಹ, ಅಂತ ಬರಹ ಜನಪರವಾಗಿ ಇರಬೇಕಾದರೆ ಸತ್ಯ ಹಾಗೂ ನ್ಯಾಯದ ಪರವಾಗಿ ಇರಬೇಕಾದರೆ ಧ್ವನಿ ಇಲ್ಲದವರ ಧ್ವನಿ ಆಗಬೇಕಾದರೆ ಹರಿತ ಮತ್ತು ತೀಕ್ಷ್ಣವಾಗಬೇಕಾದರೆ ಪತ್ರಕರ್ತರು ಹೆಚ್ಚು ಹೆಚ್ಚು ಓದಬೇಕು ಅಧ್ಯಯನ ಶೀಲರಾಗಬೇಕು ಆಗ ಮಾತ್ರ ಬರಹದಲ್ಲಿ ಉತ್ಕೃಷ್ಟತೆ ಸಾಧಿಸಲು ಸಾಧ್ಯ ಎಂದು ದಾವಣಗೆರೆ ಸಾಹಿತಿ ವಿರೂಪಾಕ್ಷಪ್ಪ ಪಂಡಿತ ಅಭಿಪ್ರಾಯಪಟ್ಟರು.

ಅವರು ಪಟ್ಟಣದಲ್ಲಿ ಕರ್ನಾಟಕ ಪ್ರೆಸ್‌ಕ್ಲಬ್ ವತಿಯಿಂದ ಪತ್ರಿಕಾ ದಿನಾಚರಣೆ ಹಾಗೂ ಪದಗ್ರಹಣ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. ಸಮಾಜ ಇಂದು ಯಾರ ಮೇಲಾದರೂ ನಂಬಿಕೆ ಇಟ್ಟಿದೆ ಎನ್ನುವುದಾದರೆ ಯಾರ ಮಾತನ್ನಾದರೂ ಕೇಳುತ್ತದೆ ಎನ್ನುವುದಾದರೆ ಅದು ಪತ್ರಕರ್ತರು ಮಾತ್ರ ಪತ್ರಕರ್ತರನ್ನು ಮಾತ್ರ ಸಮಾಜ ನಂಬುತ್ತದೆ ಸಮಾಜದ ಇಂತಹ ಗುರುತರವಾದ ನಂಬಿಕೆಯನ್ನು ಪತ್ರಕರ್ತ ರ ಮೇಲೆ ಇರಿ ಸಿಕೊಂಡಿರುವಾಗ ಪತ್ರಕರ್ತರು ನಿಷ್ಪಕ್ಷಪಾತವಾದ,ಜಾತಿ ಧರ್ಮಗಳ ಕನ್ನಡಕ ತೆಗೆದುಹಾಕಿ , ಸಮಾಜವನ್ನು ಅವಲೋಕಿಸಿ ಬರೆಯುವ ಮೂಲಕ ತಮ್ಮ ವೃತ್ತಿಪಾವಿತ್ರತೆಯನ್ನು ಕಾಪಾಡಿಕೊಳ್ಳಬೇಕು ಎಂದರು . ಪತ್ರಕರ್ತರು ಜಾತಿ ಧರ್ಮಗಳಿಂದ ಹೊರತಾಗ ಪತ್ರಿಕಾ ಧರ್ಮವನ್ನು ಪಾಲಿಸಬೇಕು ನಿಜವಾದ ಜಾತ್ಯಾತೀತತೆ ಧರ್ಮ ನಿರಪೇಕ್ಷತೆ ಪಾಲಿಸುವ ಒಂದು ವರ್ಗ ಎಂದರೆ ಅದು ಪತ್ರಕರ್ತರು ಮಾತ್ರ ಆದರೆ ಇತ್ತೀಚಿಗೆ ಸಾಹಿತ್ಯ ಸಾಂಸ್ಕೃತಿಕ ಭಾಷೆ ಮುಂತಾದ ಸಂಘಟನೆಗಳಲ್ಲಿ ಜಾತೀಯತೆಯ ಪ್ರಭಾವ ಕೈ ಆಡಿಸುತ್ತಾ ಕಲುಷಿತಗೊಳಿಸುತ್ತಿದೆ ಎಂದು ತಮ್ಮ ಆತಂಕವನ್ನು ವ್ಯಕ್ತಪಡಿಸಿದರು

ಕಾರ್ಯಕ್ರಮದ ಸಾನಿಧ್ಯವನ್ನು ಡೋಣೂರು ಶ್ರೀಗಳು ವಹಿಸಿದ್ದರು. ಶಾಸಕ ನೇಮಿರಾಜನಾಯ್ಕ ಉದ್ಘಾಟಿಸಿ ಮಾತನಾಡಿ, ಪತ್ರಿಕಾ ವರದಿಗಾರರಿಗೆ ಗೌರವ ಧನ ಅಲ್ಪ ಪ್ರಮಾಣದಲ್ಲಿ ಸಿಗುತ್ತಿದ್ದು, ಇವರಿಗೆ ಸರ್ಕಾರದಿಂದ ಗೌರವ ಧನ ನೀಡಲು ಸರ್ಕಾರದ ಗಮನ ಸೆಳೆಯಲಾಗುವುದು ಎಂದರು. ಪತ್ರಕರ್ತರ ಯಾರ ಮುಲಾಜೂ ಇಲ್ಲದೇ ವಸ್ತುನಿಷ್ಠವಾಗಿ ಕೆಲಸ ಮಾಡಬೇಕು ಎಂಬ ಕಿವಿಮಾತನ್ನು ಹೇಳಿದರು. ಮುಂದಿನ ದಿನಗಳಲ್ಲಿ ಕೊಟ್ಟೂರಿನ ಪತ್ರಕರ್ತರಿಗೆ ನಿವೇಶನ

## ವಿಜೃಂಭಣೆಯಿಂದ ಜರುಗಿದ ಮಧ್ಯಾರಾಧನೆ : ಭಕ್ತಿ ಭಜನೆಯೊಂದಿಗೆ ಜರುಗಿದ ರಥೋತ್ಸವ



ತುಂಗಾಕಿರಣ ಸುದ್ದಿ

ಕುಷ್ಟಗಿ : ಶ್ರೀ ಟೀಕಾರಾಧನೆಯ ಮಧ್ಯಾರಾದನೆಯ ಪ್ರಯುಕ್ತ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಇಂದು ಮಂಗಳವಾರ ಮುಂಜಾನೆಯಿಂದ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು.

ಮುಂಜಾನೆ 6 ಗಂಟೆಗೆ ಸುಪ್ರಭಾತ, 7:00 ಗಂಟೆಗೆ ಶ್ರೀ ಟೀಕಾರಾಯರ ಅಷ್ಟೋತ್ತರ, 9:00 ರಾಘವೇಂದ್ರ ಸ್ವಾಮಿಗಳ ಹಾಗೂ ಟೀಕಾರಾಯರ ಬೃಂದಾವನಗಳಿಗೆ ಪಂಚಾಮೃತ ಅಭಿಷೇಕ ಹಾಗೂ ವಿಶೇಷ ಅಲಂಕಾರ ಮಾಡಲಾಗಿತ್ತು. ಮಧ್ಯಾಹ್ನ 12ಕ್ಕೆ ಮಠದ ಆವರಣಗಳಿಗೆ ಉತ್ಸವ ಮೂರ್ತಿಗಳೊಂದಿಗೆ ರಥೋತ್ಸವವು ಭಕ್ತಿ ಭಜನೆಯೊಂದಿಗೆ ಜರುಗಿತು. ಮಧ್ಯಾಹ್ನ 1:00ಗೆ ನೈವೇದ್ಯ ಅಲಂಕಾರದೊಂದಿಗೆ ಮಹಾ ಮಂಗಳಾರತಿ ನಡೆಯಿತು.

ಶ್ರೀ ಮಜ್ಜಯತೀರ್ಥರ ಪ್ರೀತ್ಯರ್ಥಾವಾಗಿ ಹಾಗೂ ಲೋಕ ಕಲ್ಯಾಣಾರ್ಥಕಾಗಿ ಬ್ರಹ್ಮಸೂತ್ರ ಹೋಮ ನಡೆಯಿತು. ಪಂ. ಪ್ರಲ್ಹಾದ್ ಆಚಾರ್ ಪೂಜಾರ ಹನುಮಸಾಗರ ಇವರಿಂದ ಉಪನ್ಯಾಸ ಜರುಗಿತು. ಈ ಸಂದರ್ಭದಲ್ಲಿ ಬ್ರಾಹ್ಮಣ ಸಮಾಜದ ಮುಖಂಡರಾದ ತಿಮ್ಮಪ್ಪಯ್ಯ ದೇಸಾಯಿ, ಅಡವಿರಾವ್ ಟೀಕೋಟೀಕರ್, ಶ್ರೀನಿವಾಸಾಚಾರ್ ಜೋಶಿ ಮುಂಗಲಿ, ಹನುಮೇಶಾಚಾರ್ ಡಬ್ಬೆರ್, ಚಿನ್ನಪ್ಪ , ತಮ್ಮಣ್ಣಾಚಾರ್ ದಿಗ್ಗಾವಿ, ವರದೇಂದ್ರರಾವ್ ಐದಭಾವಿ, ಅರ್ಚಕರಾದ ಶ್ರೀ ಹರಿಆಚಾರ್ ಅಶ್ರೀತ್, ಭೀಮಸೇನರಾವ್ ಕುಲಕರ್ಣಿ ಬನ್ನೆಟ್ಟಿ ಸೇರಿದಂತೆ ವಿಪ್ರ ಸಮಾಜದ ಬಾಂಧವರು ಇದ್ದರು.

# ಜಿಲ್ಲಾಡಳಿತದಿಂದ ಶಿವಶರಣ ಹಡಪದ ಅಪ್ಪಣ್ಣ ಜಯಂತಿ

**ರಾಯಚೂರು,** : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜುಲೈ 15ರಂದು ಶಿವಶರಣ ಹಡಪದ ಅಪ್ಪಣ್ಣ ಅವರ ಜಯಂತ್ಯುತ್ಸವ ನಡೆಯಿತು.

ಜಯಂತ್ಯುತ್ಸವ ನಿಮಿತ್ತ ಬೆಳಗ್ಗೆ ಬಸವೇಶ್ವರ ವೃತ್ತದಿಂದ ಆರಂಭಗೊಂಡ ಶ್ರೀ ಶಿವಶರಣ ಹಡಪದ ಅಪ್ಪಣ್ಣ ಅವರ ಭಾವಚಿತ್ರದ ಮೆರವಣಿಗೆಗೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಚಾಲನೆ ನೀಡಿದರು. ಮೆರವಣಿಗೆಯು ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ರಂಗಮಂದಿರಕ್ಕೆ ಬಂದು ಸೇರಿತು. ಸಮಾಜದ ಮುಖಂಡರು, ಅಧಿಕಾರಿಗಳು ಮತ್ತು ನಾಗರಿಕರು ರಂಗಮಂದಿರದವರೆಗೆ ಮೆರವಣಿಗೆಯಲ್ಲಿ ಸಾಲಾಗಿ ಸಾಗಿ ಮೆರವಣಿಗೆಯ ಕಳೆ ಹೆಚ್ಚಿಸಿದರು.

ರಂಗಮಂದಿರದಲ್ಲಿ ನಡೆದ ವೇದಿಕೆಯ ಕರ್ಯಕ್ರಮಕ್ಕೆ ಮಹಾನಗರ ಪಾಲಿಕೆಯ ಉಪಾಧ್ಯಕ್ಷರು ಆಗಿರುವ ಪ್ರಭಾರ ಅಧ್ಯಕ್ಷರಾದ ಜೆ.ಸಾಜಿದ್ ಸಮೀರ್ ಅವರು ದೀಪ ಬೆಳಗಿ ಕರ್ಯಕ್ರಮಕ್ಕೆ ಚಾಲನೆ ನೀಡಿದರು



ಕರ್ಯಕ್ರಮದಲ್ಲಿ ಹಟ್ಟಿ ರ‍್ಕಾರಿ ಪಿಯು ಕಾಲೇಜಿನ ಪ್ರಾಚರ‍್ಯರಾದ ಕಮಲಾಬಾಯಿ ಅವರು ಶ್ರೀ ಶಿವಶರಣ ಹಡಪದ ಅಪ್ಪಣ್ಣ ಅವರ ಬಗ್ಗೆ ವಿಶೇಷ ಉಪನ್ಯಾಸ ನೀಡಿ, ಅಪ್ಪಣ್ಣನವರು ಜಾತಿ ಹಾಗೂ ಅಸಮಾನತೆಯ ವಿರುದ್ಧ ಹೋರಾಡಿದ ಮಹಾನ್ ಶರಣರಾಗಿದ್ದಾರೆ. ಸಮಾಜದಲ್ಲಿನ ದರ್ಬಲರು, ಹಿಂದುಳಿದವರು, ಬಡವರ ಬದುಕಿನ ಬಗ್ಗೆ ತಿಳಿದು ಅವರ ಹಕ್ಕುಗಳಿಗಾಗಿ ಹೋರಾಡಲು ಅಪ್ಪಣ್ಣನವರು ತಮ್ಮ ಜೀವನವನ್ನು ಸರ್ಪಿಸಿಕೊಂಡರು ಎಂದು ತಿಳಿಸಿದರು.

ಅಪ್ಪಣ್ಣನವರು ಕೇವಲ ದೇವರ ಪೂಜೆ ಮಾಡುವ ವ್ಯಕ್ತಿಯಾಗದೇ ಕಾಯಕತತ್ವ, ಸಮಾನತೆಯ ದೃಷ್ಟಿಕೋಣ, ಮಾನವತೆಯ ಬಗ್ಗೆ ಸ್ಪಷ್ಟ ಚಿಂತನೆ ಹೊಂದಿದ್ದ ವ್ಯಕ್ತಿತ್ವವುಳ್ಳವರಾಗಿದ್ದರು. ಅಪ್ಪಣ್ಣನವರು ಹೊಂದಿದ್ದ ಸಾಮಾಜಿಕ ಕಾಳಜಿಯ ವ್ಯಕ್ತಿತ್ವವು, ಅವರ ಕಾಯಕತತ್ವವು ನಮಗೆ ಆರ‍್ಶಪ್ರಾಯವಾಗಿದೆ ಎಂದರು.

ನಮ್ಮ ಸಮಾಜದಲ್ಲಿ ಈಗಲೂ ಜಾತಿ, ಮತ, ಭಾಷೆಯ ಹೆಸರಿನಲ್ಲಿ ನಡೆಯುವ ಬೇಧ–ಭಾವದ ಬಗ್ಗೆ ಯುವಕರು ಅರಿಯಬೇಕು. ಜಾಗೃತರಾಗಬೇಕು. ಕೆಟ್ಟದಾದ ವ್ಯಸನಗಳಿಗೆ ಯಾರು ಸಹ ಬಲಿಯಾಗಬಾರದು ಎಂದು ತಿಳಿಸಿದರು.

ಸಾಧಕರಿಗೆ ಸನ್ಮಾನ: ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಉತ್ತಮವಾಗಿ ವಿದ್ಯಾಭ್ಯಾಸ ಮಾಡಿ ಯಶ ಸಾಧಿಸಿದ ಹಡಪದ ಅಪ್ಪಣ್ಣ ಸಮಾಜದ ವಿದ್ಯರ‍್ಥಿಗಳಿಗೆ, ರ‍್ಕಾರಿ ಸೇವೆಯಲ್ಲಿದ್ದು ನಿವೃತ್ತರಾದವರಿಗೆ ಸನ್ಮಾನಿಸಿ ಹಾಗೂ ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು.

ಕರ್ಯಕ್ರಮದಲ್ಲಿ ತಹಸೀಲ್ದಾರ್ ಪರಶುರಾಮ್, ಹಡಪದ ಅಪ್ಪಣ್ಣ ಸಮಾಜದ ಗದ್ದೆಪ್ಪ ಎಂ, ಮಹಾಬಲೇಶ್ವರಪ್ಪ, ಕರಿಬಸವ ಗಟ್ಟಿಬಿಚ್ಚಾಲೆ, ನಾಗರಾಜ್ ರ‍್ಜಾಪುರ, ಧನಂಜಯ, ಆದಿಕವಿ ಶ್ರೀ ಮರ‍್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಶಿವಣ್ಣ, ಮುಖಂಡರಾದ ಮರಿಸ್ವಾಮಿ ಗಟ್ಟಿಬಿಚ್ಚಾಳಿ ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

ಸಮಾರಂಭದಲ್ಲಿ ಸಮಾಜದ ಹಿರಿಯರು, ಮಹಿಳೆಯರು, ಯುವಕರು ಹಾಗೂ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಕರ‍್ಯಕ್ರಮದ ಮೆರಗು ಹೆಚ್ಚಿಸಿದರು.

## ಮಾನ್ವಿ: ಕೆರೆಯಲ್ಲಿ ಮುಳುಗಿ ಯುವಕ ಸಾವು



**ಮಾನ್ವಿ:** ಪಟಣ್ಣದ ಮಹತ್ಮ ಗಾಂಧಿ ಕಾಲೋನಿ ಮುಷ್ಠೂರು ರಸ್ತೆ. ನಿವಾಸಿ ನಾಗರಾಜ್ ಭೋವಿ ಎನ್ನುವ ಯುವಕ ಇಂದು ಮುಂಜಾನೆ ರಬ್ಬಣಕಲ್ ಗ್ರಾಮದ ಜಯನಗರ ಕ್ಯಾಂಪ್ ಗುಡ್ಡದ ಹತ್ತಿರದಲ್ಲಿರುವ ಆಳವಾಗಿರುವ ಬಾಲಕೃಷ್ಣ ಕೆರೆಯಲ್ಲಿ ಈಜಲು ಹೋಗಿ ಸಾವಿಗೀಡಾಗಿದ್ದು, ಅಗ್ನಿಶಾಮಕ ಸಿಬ್ಬಂದಿಯವರು ಶವಕ್ಕಾಗಿ ಶೋಧ ಕಾರ್ಯವನ್ನು ಮುಂದುವರೆಸಿದ್ದಾರೆ

ತುಂಗಾಕಿರಣ
ಕನ್ನಡ ದಿನಪತ್ರಿಕೆ
16 ಜುಲೈ -2025

# ರೈತರ ಸಂರಕ್ಷಣೆಗೆ ಕಡ್ಡಾಯವಾಗಿ ವಿಮೆ ಕಟ್ಟಿಸಿ

**ಹಾಸನ:**– ರೈತರ ಸಂರಕ್ಷಣೆ ಮಾಡುವ ನಿಟ್ಟಿನಲ್ಲಿ ಬೆಳೆ ನಷ್ಟಕ್ಕೆ ಪರಿಹಾರ ಪಡೆಯಲು ಸಹಕಾರಿ ಆಗುವಂತೆ ರೈತರ ಮನವರಿಕೆ ಮಾಡಿ ಕಡ್ಡಾಯವಾಗಿ ವಿಮೆ ಕಟ್ಟಿಸಲು ಕ್ರಮವಹಿಸುವಂತೆ ಸಹಕಾರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎನ್. ರಾಜಣ್ಣ ಅವರು ಅಧಿಕಾರಿಗಳಿಗೆ ತಿಳಿಸಿದ್ದಾರೆ.

ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿಂದು ಏರ್ಪಡಿಸಿದ್ದ 2025-26 ಸಾಲಿನ ಮೊದಲನೇ ತ್ರೈಮಾಸಿಕ ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಗ್ರಾಮೀಣ ಪ್ರದೇಶದಲ್ಲಿ ಜನರಿಗೆ ಅರಿವು ಮೂಡಿಸಿ ಪ್ರಾಥಮಿಕವಾಗಿ ಮಣ್ಣಿನ ಗುಣಮಟ್ಟ ಸಂರಕ್ಷಣೆಗಾಗಿ ಪರೀಕ್ಷೆ ಮಾಡಿಸುವುದರ ಜೊತೆಗೆ ಮುಂದೆ ರೋಗ ರುಜಿನಗಳು ಹೆಚ್ಚಾಗದಂತೆ ತಡೆಯಲು ಮಣ್ಣಿನ ಫಲವತ್ತತೆ ಹೆಚ್ಚಿಸಲು ಅಗತ್ಯ ಕ್ರಮ ವಹಿಸುವಂತೆ ಸೂಚಿಸಿದ ಸಚಿವರು ಪರ್ಯಾಯ ಬೆಳೆ ಬೆಳೆಯಲು ರೈತರಿಗೆ ಮನವೊಲಿಸಿ ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ರೈತರಿಗೆ ಮಾಹಿತಿ ನೀಡುವ ನಿಟ್ಟಿನಲ್ಲಿ ಪ್ರತಿ ತಾಲ್ಲೂಕಿನಲ್ಲಿ ಪ್ರತಿ ಮಾಹೆ ಸ್ಥಳೀಯ ಜನ 'ಪ್ರತಿನಿಧಿಗಳನ್ನು ಆಹ್ವಾನಿಸಿ ಕ್ಷೇತ್ರೋತ್ಸವವನ್ನು ನಡೆಸುವ ಮೂಲಕ ರೈತರಿಗೆ ಮಾಹಿತಿ ನೀಡಲು ಕ್ರಮವಹಿಸಿ ಇದರಿಂದ ರೈತರು ಲಾಭದಾಯಕ ಬೆಳೆಗಳನ್ನು ಬೆಳೆಯಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ತೆಂಗು ಬೆಳೆಗೆ ಬರುವ ರೋಗಗಳಿಗೆ ಸಮಗ್ರವಾಗಿ ಪರಿಹಾರ ಕಂಡುಕೊಳ್ಳಲು ಪರಿಣಿತ ತಜ್ಞರ ತಂಡದಿಂದ ವರದಿ ಪಡೆದು ಶಾಶ್ವತ ಪರಿಹಾರ ಕಂಡು ಕೊಳ್ಳಲು ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ನಿರ್ಧಾರ ತೆಗೆದುಕೊಳ್ಳಲು ಕೃಷಿ ಮತ್ತು ತೋಟಗಾರಿಕೆ ಸಚಿವರೊಂದಿಗೆ ಮಾತುಕತೆ ನಡೆಸಲಾಗುವುದು ಎಂದು ತಿಳಿಸಿದರು.

ಕುಡಿಯುವ ನೀರಿನ ಮಾದರಿಗಳನ್ನು ಸಂಗ್ರಹಿಸಿ ಪರಿಶೀಲಿಸಿ ಯೋಗ್ಯವಲ್ಲದವುಗಳ ಬಗ್ಗೆ ಗಮನಹರಿಸಿ ಎಂದ ಸಚಿವರು ರುಚಿಗಾಗಿ ಹಾನಿ ಕಾರಕ ವಸ್ತುಗಳನ್ನು ಬಳಸಿ ತಯಾರಿಸುವ ಖಾದ್ಯಗಳ ಸೇವನೆಯಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ ಇದನ್ನು ಗಂಭೀರವಾಗಿ ಪರಿಗಣಿಸಿ ಕ್ರಮವಹಿಸುವಂತೆ ಆಹಾರ ಸುರಕ್ಷತಾ ಅಧಿಕಾರಿಗಳಿಗೆ ಸೂಚಿಸಿದರು.

ಮಾಧ್ಯಮಗಳಲ್ಲಿ ವರದಿಯಾಗಿರುವ ಹೃದಯಾಘಾತದಿಂದ ಸಾವಾಗಿರುವ ಬಗ್ಗೆ ಜನರಲ್ಲಿ ಆತಂಕ ಮೂಡಿಸುತ್ತದೆ ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಅಧಿಕಾರಿಗಳು ರೇಡಿಯೋ ಮೂಲಕ ಪೋನ್ ಇನ್ ಕಾರ್ಯಕ್ರಮ ಮಾಡಿ ಜನರ ಪ್ರಶ್ನೆಗಳಿಗೆ ಉತ್ತರಿಸಿ ಜನರಲ್ಲಿರುವ ಆತಂಕವನ್ನು ದೂರ ಮಾಡುವಂತೆ ತಿಳಿಸಿದರಲ್ಲದೆ, ಸ್ಥಳೀಯ ವಾಹಿನಿಗಳ ಮೂಲಕವು ಕೂಡ ಜನರಿಗೆ ಅರಿವು ಮೂಡಿಸಲು ಕ್ರಮವಹಿಸುವಂತೆ ತಿಳಿಸಿದರು.

ಈಗಾಗಲೇ ಜಿಲ್ಲೆಯಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಆರೋಗ್ಯ ತಪಾಸಣೆ ಮಾಡಲಾಗುತ್ತದೆ, ಇದನ್ನು ರಾಜ್ಯ ವ್ಯಾಪ್ತಿಯಲ್ಲಿ ನಡೆಸಲು ಚಿಂತನೆ ನಡೆದಿದೆ ಎಂದರಲ್ಲದೆ, ಹಾಸನ ಜಿಲ್ಲೆಯಲ್ಲಿ ಸಾರ್ವಜನಿಕರ ಹೃದಯ ತಪಾಸಣೆಗಾಗಿ ಮೆಗಾ ಕ್ಯಾಂಪ್ ಏರ್ಪಡಿಸಲಾಗುವುದು ಎಂದು ತಿಳಿಸಿದರು.



ಜೆ.ಜೆ.ಎಂ.ಯೋಜನೆಯಡಿ ಮೂಲಭೂತವಾಗಿ ವಾಟರ್ ಟ್ಯಾಂಕ್ ನಿರ್ಮಾಣ ಮಾಡಿರುವ ಬಗ್ಗೆ ಖಾತರಿ ಪಡಿಸಿಕೊಂಡು ನಂತರ ಬಿಲ್ ಪಾವತಿಸಿ, ಕೇವಲ ಪೈಪ್ ಲೈನ್ ಮಾಡಿರುವುದಕ್ಕೆ ಹಣ ಪಾವತಿ ಮಾಡಬೇಡಿ ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಫಲಿತಾಂಶವನ್ನು ಉನ್ನತ ಸ್ಥಾನಕ್ಕೆ ತರಲು ಹತ್ತನೇ ತರಗತಿಯ ಹಂತದಲ್ಲಿ ಮಕ್ಕಳಿಗೆ ಒತ್ತಡ ಹಾಕುವ ಬದಲಾಗಿ 8ನೇ ತರಗತಿಯಿಂದಲೆ ಮಕ್ಕಳ ಕಲಿಕೆಗೆ ಹೆಚ್ಚಿನ ಒತ್ತು ನೀಡಿ ಮಕ್ಕಳನ್ನು ಪರೀಕ್ಷೆಗೆ ಅಣಿಗೊಳಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಶಿಥಿಲವಾಗಿರುವ ಶಾಲಾ ಕಟ್ಟಡಗಳ ದುರಸ್ತಿಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರಲ್ಲದೆ, ಹೆಣ್ಣು ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕ ಶೌಚಾಲಯವಿರುವಂತೆ ನೋಡಿಕೊಳ್ಳಿ ಎಂದು ತಿಳಿಸಿದರು.

ಯಾವುದೇ ಮಗುವೂ ವಿದ್ಯಾರ್ಥಿ ವೇತನದಿಂದ ವಂಚಿತರಾಗದಂತೆ ಅಧಿಕಾರಿಗಳು ನಿಗಾವಹಿಸಿ ಅರ್ಹ ಮಕ್ಕಳಿಗೆ ಸೌಲಭ್ಯ ಕಲ್ಪಿಸಲು ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಅಧಿಕಾರಿಗಳು ನಿಗಾವಹಿಸಲು ಸೂಚನೆ ನೀಡಿದರು. ಅಧಿಕಾರಿಗಳು ಸಾರ್ವಜನಿಕರಿಗೆ ಸಕಾರಾತ್ಮಕವಾಗಿ ಸ್ಪಂದಿಸಿ ತಮ್ಮ ಕಚೇರಿಗೆ ಸಲ್ಲಿಕೆಯಾಗುವ ಅರ್ಜಿಗಳನ್ನು ನಿಗಧಿತ ದಿನಗಳೊಳಗೆ ವಿಲೇವಾರಿ ಮಾಡಲು ಎಚ್ಚರವಹಿಸಲು ತಿಳಿಸಿದರು.

ತಹಸೀಲ್ದಾರ್‌ಗಳು ಜನ ಸಂಪರ್ಕ ಸಭೆ ನಡೆಸಿ ಸ್ಥಳದಲ್ಲಿ ಅರ್ಜಿ ಸ್ವೀಕರಿಸಿ ಅರ್ಹರು ಯಾವುದೇ ಯೋಜನೆಯ ಸೌಲಭ್ಯದಿಂದ ದೂರ ಉಳಿಯದಂತೆ ನೋಡಿಕೊಳ್ಳಿ ಎಂದರಲ್ಲದೆ, ಪೌತಿ ಖಾತೆ, ಪೋಡಿ ಮತ್ತಿತರ ಕರ್ತವ್ಯಗಳನ್ನು ಎಚ್ಚರಿಕೆಯಿಂದ ನಿರ್ವಹಿಸಿ ಎಂದು ಸೂಚಿಸಿದರು.

ಅರ್ಹರು ಪಿಂಚಣಿಯಿಂದ ವಂಚಿತರಾಗದಂತೆ ಗ್ರಾಮ ಸಹಾಯಕರು ಮನೆ ಮನೆಗೆ ಭೇಟಿ ನೀಡಿ ಪರಿಶೀಲನೆ ಮಾಡಿ ಅರ್ಜಿ ಪಡೆದು ಸವಲತ್ತು ಒದಗಿಸಲು ಕ್ರಮವಹಿಸುವಂತೆ ತಿಳಿಸಿದರು.

ಅಂಗನವಾಡಿ ಕಾರ್ಯಕರ್ತೆಯರ ಆಯ್ಕೆಗೆ ಉಚ್ಚ ನ್ಯಾಯಾಲಯದ ಮಾರ್ಗಸೂಚಿಗಳನ್ನು ತಪ್ಪದೇ ಅನುಸರಿಸುವಂತೆ ನಿರ್ದೇಶನ ನೀಡಿದರು.

ರೈತರು ಬೆಳೆಸಲು ಆಸಕ್ತಿಯಿರುವ ಸಸಿಗಳನ್ನು ಸಸ್ಯ ಕ್ಷೇತ್ರಗಳಲ್ಲಿ ಬೆಳೆಸಿ ವಿತರಣೆ ಮಾಡಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಗಂಗಾ ಕಲ್ಯಾಣ ಯೋಜನೆಯಡಿ ಕೊರೆದಿರುವ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ನಗರ ಪ್ರದೇಶದಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಿ ಎಂದ ಸಚಿವರು ಸಾರ್ವಜನಿಕರ ಸುಗಮ ಸಂಚಾರಕ್ಕೆ ರಸ್ತೆಗಳ ಗುಂಡಿ ಮುಚ್ಚುವ ಕಾರ್ಯವನ್ನು ಮಾಡಿಸಿ ರಸ್ತೆಗಳು ಒತ್ತುವರಿ ಆಗಿದ್ದಲ್ಲಿ ತೆರವುಗೊಳಿಸಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಮಹಾನಗರ ಪಾಲಿಕೆಗೆ ಹೊಸದಾಗಿ ಸೇರ್ಪಡೆ ಆಗಿರುವ ಗ್ರಾಮೀಣ ಪ್ರದೇಶಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ನಿಗಾವಹಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಇ- ಖಾತೆಗೆ ಬರುವ ಸಾರ್ವಜನಿಕರಿಗೆ ಮಾರ್ಗದರ್ಶನ ನೀಡಿ ಜೊತೆಗೆ ಸಕಾರಾತ್ಮಕವಾಗಿ ಸ್ಪಂದಿಸಿ ಕೆಲಸ ಮಾಡುವಂತೆ ಸೂಚಿಸಿದರು.

ಕರ್ನಾಟಕ ರಾಜ್ಯ ಗೃಹ ಮಂಡಳಿ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ಎಂ.ಶಿವಲಿಂಗೇಗೌಡ ಅವರು ಮಾತನಾಡಿ ಕಡ್ಡಾಯವಾಗಿ ರೈತರಿಂದ ಬೆಳೆ ವಿಮೆ ಕಟ್ಟಿಸಲು ಕ್ರಮವಹಿಸಿ ಬೆಳೆ ನಷ್ಟವಾದಲ್ಲಿ ಪರಿಹಾರ ಪಡೆಯಲು ಸಹಕಾರಿ ಆಗುತ್ತದೆ ಎಂದರು.

ಜಿಲ್ಲೆಯಲ್ಲಿ 467 ಶಾಲೆಗಳಲ್ಲಿ 10 ಕ್ಕಿಂತ ಕಡಿಮೆ ಮಕ್ಕಳಿದ್ದಾರೆ ಈ ಶಾಲೆಗಳಲ್ಲಿ ಮೂರು ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದ ಅವರು ತಮ್ಮ ಮಕ್ಕಳು ಇಂಗ್ಲೀಷ್ ಮಾಧ್ಯಮದಲ್ಲಿ ಕಲಿಯಲ್ಲಿ ಎಂದು ಪೋಷಕರು ಮಕ್ಕಳನ್ನು ಖಾಸಗಿ ಶಾಲೆಗಳಿಗೆ ದಾಖಲು ಮಾಡುತ್ತಿದ್ದಾರೆ ಈ ನಿಟ್ಟಿನಲ್ಲಿ ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ಕಡಿಮೆ ಮಕ್ಕಳ ಸಂಖ್ಯೆ ಇರುವ ಶಾಲೆಗಳನ್ನು ಒಟ್ಟಿಗೆ ಸೇರ್ಪಡೆ ಮಾಡಿ ಕೆ.ಪಿ.ಎಸ್. ಶಾಲೆಗಳನ್ನು ಪ್ರಾರಂಭಿಸಿದರೆ ಉತ್ತಮವಾಗುತ್ತದೆ ಎಂದರು.

ತಿಂಡಿ ತಿನಿಸುಗಳಿಗೆ ಹಾನಿಕಾರಕ ಬಣ್ಣ ಬಳಸಿ ತಯಾರಿಸುವುದರಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ ಇಂತಹ ಆಹಾರ ಪದಾರ್ಥಗಳನ್ನು ಸಾರ್ವಜನಿಕರಿಗೆ ವಿತರಿಸಿದಂತೆ ತಡೆಯಲು ನಿಗಾವಹಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಸಂಸದರಾದ ಶ್ರೇಯಸ್ ಪಟೇಲ್ ಅವರು ಮಾತನಾಡಿ ಹೃದಯಾಘಾತದಿಂದ ಸಾವನ್ನಪ್ಪಿದ ಪ್ರಕರಣಗಳ ಬಗ್ಗೆ ಕೂಲಂಕುಷವಾಗಿ ಪರಿಶೀಲಿಸಿ ನಿಖರವಾದ ನಂತರ ಪ್ರಕಟಿಸುವಂತೆ ವೈದ್ಯರಿಗೆ ತಿಳಿಸಿದರು.

ಶಾಸಕರಾದ ಸಿ.ಎನ್ ಬಾಲಕೃಷ್ಣ ಅವರು ಮಾತನಾಡಿ ಜಿಲ್ಲೆಯ ಪ್ರಮುಖ ಬೆಳೆಯಾದ ತೆಂಗಿಗೆ ಕಪ್ಪು ತಲೆ ಹುಳು, ಕಾಂಡ ಸೊರುವುದು, ಸುಳಿ ರೋಗ ಹಾಗೂ ಗರಿ ರೋಗಗಳು ಕಂಡುಬರುತ್ತಿದ್ದು, ತೆ-ಂಗು ಸಂರಕ್ಷಣೆ ಮಾಡಿಕೊಳ್ಳವ ನಿಟ್ಟಿನಲ್ಲಿ ಸರ್ಕಾರ ನೂರು ಕೋಟಿ ರೂಗಳನ್ನು ಮೀಸಲಿಡಲು ಸಚಿವರಲ್ಲಿ ಮನವಿ ಮಾಡಿದರು.

ವಿಧಾನ ಪರಿಷತ್ ಸದಸ್ಯರಾದ ವಿವೇಕಾನಂದ ಅವರು ಮಾತನಾಡಿ ಸರ್ಕಾರಿ ಶಾಲೆಗಳಿಗೆ ಹಣ್ಣಿನ ಗಿಡಗಳು ಹಾಗೂ ಅಲಂಕಾರಿಕ ಗಿಡಗಳನ್ನು ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯುವ ಸಬಲೀಕರಣ ಇಲಾಖೆ ಹಾಗೂ ಹಾಸನ ಜಿಲ್ಲಾ ಪಂಚಾಯಿತಿ ಆಡಳಿತಾಧಿಕಾರಿ ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ನವೀನ್ ರಾಜ್ ಸಿಂಗ್ ಅವರು ಮಾತನಾಡಿ ಅಸುರಕ್ಷತೆ ಆಹಾರ ಪದಾರ್ಥಗಳನ್ನು ನೀಡುತ್ತಿರುವ ಅಂಗಡಿಗಳ ಬಾಗಿಲು ಮುಚ್ಚಿಸಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಲತಾ ಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತ,ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್.ಪೂರ್ಣಿಮಾ, ಉಪ ಅರಣ್ಯ ಸಂರಕ್ಷಣಾಧಿ ಕಾರಿ ಸೌರಬ್ ಕುಮಾರ್ ಉಪಸ್ಥಿತರಿದ್ದರು.

ನಾಮ ನಿರ್ದೇಶಿತ ಸದಸ್ಯರುಗಳಾದ ಎಂ.ಎ.ಗೋಪಾಲಸ್ವಾಮಿ, ಸೌಮ್ಯ, ಸುಲೋಚನಾ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

ಖ್ಯಾತ ನಟಿ ಬಿ.ಸರೋಜದೇವಿ ಅವರು ನಿಧನ ಹೊಂದಿದ ಹಿನ್ನೆಲೆಯಲ್ಲಿ ಮೌನ ಆಚರಿಸುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಇದೇ ಸಂದರ್ಭದಲ್ಲಿ ಯುವನಿಧಿ ನೋಂದಣಿ ಕುರಿತಂತೆ ಪೋಸ್ಟರ್ ಬಿಡುಗಡೆ ಮಾಡಲಾಯಿತು.


## ವರದಿಗಾರರಾಗಿ ನೇಮಕ



ಶ್ರೀ ಬಿ.ಕೃಷ್ಣ ಇವರನ್ನು ಹಗರಬೊಮ್ಮನಹಳ್ಳಿ ವರದಿಗಾರನ್ನಾಗಿ ನೇಮಕಗೊಳಿಸಿ ಆದೇಶಿಸಲಾಗಿದೆ. ಓದುಗರು, ಜಾಹಿರಾತುದಾರರು ಸಹಕರಿಸಬೇಕಾಗಿ ವಿನಂತಿ

## ವರದಿಗಾರರಾಗಿ ನೇಮಕ



ಶ್ರೀ ರವಿ ತಳವಾರ ಇವರನ್ನು ಜೇವರ್ಗಿ ತಾಲೂಕಾ ವರದಿಗಾರನ್ನಾಗಿ ನೇಮಕಗೊಳಿಸಿ ಆದೇಶಿಸಲಾಗಿದೆ. ಓದುಗರು, ಜಾಹಿರಾತುದಾರರು ಸಹಕರಿಸಬೇಕಾಗಿ ವಿನಂತಿ

## ವರದಿಗಾರರಾಗಿ ನೇಮಕ



ಶ್ರೀ ಉಮೇಶ ಹಿಟ್ನಾಳ ಇವರನ್ನು ಕೊಪ್ಪಳ ನಗರ ವರದಿಗಾರನ್ನಾಗಿ ನೇಮಕಗೊಳಿಸಿ ಆದೇಶಿಸಲಾಗಿದೆ. ಓದುಗರು, ಜಾಹಿರಾತುದಾರರು ಸಹಕರಿಸಬೇಕಾಗಿ ವಿನಂತಿ

## ವರದಿಗಾರರಾಗಿ ನೇಮಕ



ಶ್ರೀ ದೇವದಾನಂ ಇವರನ್ನು ಗಂಗಾವತಿ ನಗರ ವರದಿಗಾರನ್ನಾಗಿ ನೇಮಕಗೊಳಿಸಿ ಆದೇಶಿಸಲಾಗಿದೆ. ಓದುಗರು, ಜಾಹಿರಾತುದಾರರು ಸಹಕರಿಸಬೇಕಾಗಿ ವಿನಂತಿ

## ವರದಿಗಾರರಾಗಿ ನೇಮಕ



ಶ್ರೀ ಗ್ಯಾನಪ್ಪ ಇವರನ್ನು ಸಿಂಧನೂರು ನಗರ ವರದಿಗಾರನ್ನಾಗಿ ನೇಮಕಗೊಳಿಸಿ ಆದೇಶಿಸಲಾಗಿದೆ. ಓದುಗರು, ಜಾಹಿರಾತುದಾರರು ಸಹಕರಿಸಬೇಕಾಗಿ ವಿನಂತಿ

## ವರದಿಗಾರರಾಗಿ ನೇಮಕ



ಶ್ರೀ ನಟರಾಜ ಉಜ್ಜಯಿನಿ ಇವರನ್ನು ಕೊಟ್ಟೂರು ತಾಲೂಕಾ ವರದಿಗಾರನ್ನಾಗಿ ನೇಮಕಗೊಳಿಸಿ ಆದೇಶಿಸಲಾಗಿದೆ. ಓದುಗ-'ರು, ಜಾಹಿರಾತುದಾರರು ಸಹಕರಿಸಬೇಕಾಗಿ ವಿನಂತಿ


## ಧರ್ತಿ ಆಬಾ ಜನಭಾಗಿಧಾರಿ ಅಭಿಯಾನ
# ಬುಡಕಟ್ಟು ಜನರು ಮುಖ್ಯವಾಹಿನಿಗೆ ಬರಲಿ : ಸಂಸದ ಈ.ತುಕಾರಾಂ



ಬಳ್ಳಾರಿ:ಕೇಂದ್ರ ಸರ್ಕಾರ ಜನಸಾಮಾನ್ಯರ ಶ್ರೇಯೋಭಿವೃದ್ಧಿಗಾಗಿ ಜಾರಿಗೊಳಿಸಿರುವ ಯೋಜನೆಗಳನ್ನು ಮನೆ ಮನೆಗೆ ತಲುಪಿಸುವ ಗುರಿ ನಮ್ಮದಾಗಿದ್ದು, ಪಿ.ಎಂ ಜನಜಾತಿ ಉನ್ನತ ಗ್ರಾಮ ಅಭಿಯಾನದಡಿ ಧರ್ತಿ ಆಬಾ ಜನಭಾಗಿ ಅಭಿಯಾನವನ್ನು ಜು.15 ರಿಂದ ಜು.30 ರವರೆಗೆ ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ಹಮ್ಮಿಕೊಳ್ಳಲಾಗಿದೆ. ಬುಡಕಟ್ಟು ಸಮುದಾಯಗಳು ಸರ್ಕಾರದ ಯೋಜನೆಗಳನ್ನು ಸದುಪಯೋಗ ಪಡೆದು ಮುಖ್ಯವಾಹಿನಿಗೆ ಬರಬೇಕು ಎಂದು ಸಂಸದರಾದ ಈ.ತುಕಾರಾಂ ಅವರು ಹೇಳಿದರು.

ಕೇಂದ್ರ ಸರ್ಕಾರ ಬುಡಕಟ್ಟು ಮಂತ್ರಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಬಳ್ಳಾರಿ ಇವರ ಸಹಯೋಗದಲ್ಲಿ ಕೇಂದ್ರ ಸರ್ಕಾರದ ಪಿ.ಎಂ ಜನಜಾತಿ ಉನ್ನತ ಗ್ರಾಮ ಅಭಿಯಾನದಡಿ "ಧರ್ತಿ ಆಬಾ ಜನಭಾಗಿಧಾರಿ ಅಭಿಯಾನದ ಸಂಪೂರ್ಣ ಸವಲತ್ತುಗಳ ಜಾಗೃತಿ ಅಭಿಯಾನ" ಕ್ಕೆ ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ದೇಶದಲ್ಲಿ ಪರಿಶಿಷ್ಟ ಪಂಗಡ ಜನಾಂಗದವರು ಹೆಚ್ಚಾಗಿರುವ 26 ರಾಜ್ಯಗಳು, 04 ಕೇಂದ್ರಾಡಳಿತ ಪ್ರದೇಶಗಳು, ರಾಜ್ಯದ 28 ಜಿಲ್ಲೆಗಳು, 1089 ಗ್ರಾಮಗಳನ್ನು ಆಯ್ಕೆ ಮಾಡಲಾಗಿದ್ದು, ಆ ಪೈಕಿ ಬಳ್ಳಾರಿ ಜಿಲ್ಲೆಯ 5 ವಲಯಗಳಿಂದ (ತಾಲೂಕುಗಳಿಂದ) ಒಟ್ಟು 59 ಗ್ರಾಮಗಳನ್ನು ಪ್ರಧಾನಮಂತ್ರಿ ಜನಜಾತಿ ಉನ್ನತ ಗ್ರಾಮ ಅಭಿಯಾನದಡಿ ಆಯ್ಕೆ ಮಾಡಲಾಗಿದೆ. ದೇಶದಲ್ಲಿ ಸುಮಾರು 5.5 ಕೋಟಿ ಬುಡಕಟ್ಟು ಜನಸಂಖ್ಯೆಯಿದ್ದು, ಬುಡಕಟ್ಟು ಜನ ಸಮಗ್ರ ಅಭಿವೃದ್ಧಿಗಾಗಿ ಮೂಲಭೂತ ಸೌಕರ್ಯಗಳು, ಆರೋಗ್ಯ, ಶಿಕ್ಷಣ, ಜೀವನೋಪಾಯಕ್ಕೆ ಬೇಕಾದ ಸೌಲಭ್ಯಗಳನ್ನು ಒದಗಿಸಿಕೊಡಲು ಒಟ್ಟಾರೆಯಾಗಿ ಬುಡಕಟ್ಟು ಜನರ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಅಭಿವೃದ್ಧಿಗೆ ಕ್ರಿಯಾಯೋಜನೆ ರೂಪಿಸಲು ಕ್ರಮಕೈಗೊಳ್ಳಬೇಕಾಗಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು, ಮೀಸಲಿರುವ 79,156 ಕೋಟಿ ರೂ. ಗಳಲ್ಲಿ ಬುಡಕಟ್ಟು ಸಮುದಾಯಗಳು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುವ ದೇಶದ 63,000 ಗ್ರಾಮಗಳಲ್ಲಿ ಅಭಿವೃದ್ಧಿಪಡಿಸಲು ಕ್ರಿಯಾಯೋಜನೆ ರೂಪಿಸಲಾಗಿದೆ ಎಂದು ಹೇಳಿದರು.

ಕೇಂದ್ರ ಬುಡಕಟ್ಟು ಮಂತ್ರಾಲಯ ಈ ಯೋಜನೆಗಳನ್ನು ಅನುಷ್ಠಾನಗೊಳಿಸುವ ಜವಾಬ್ದಾರಿ ಹೊತ್ತಿದೆ. ದೇಶದ ಸುಮಾರು 8 ಕೋಟಿ ಜನರಿಗೆ ಯೋಜನೆಯ ಲಾಭ ದೊರೆಯಲಿದೆ. 2024-25 ರಿಂದ 2028-29ನೇ ಸಾಲಿನವರೆಗೆ 5 ವರ್ಷಗಳಲ್ಲಿ ಯೋಜನೆಯನ್ನು ಪೂರ್ಣಗೊಳಿಸಲಾಗುವುದು. 2024-25 ರಿಂದ 2025-26ನೇ ಸಾಲಿಗೆ ಮೊದಲ ಹಂತದಲ್ಲಿ 4,000 ಕೋಟಿ ಅನುದಾನವನ್ನು ಪ್ರಧಾನಮಂತ್ರಿ ಜನಜಾತಿ ಉನ್ನತ ಗ್ರಾಮ ಅಭಿಯಾನದಡಿ 17 ಇಲಾಖೆಗಳ ಸಹಯೋಗದಲ್ಲಿ ಜಿಲ್ಲೆಯ 59 ಗ್ರಾಮಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕ್ರಿಯಾಯೋಜನೆಯನ್ನು ಸಿದ್ಧಪಡಿಸಬೇಕಾಗಿದೆ. ಈ ಯೋಜನೆಗೆ ಒಳಪಟ್ಟ 59 ಗ್ರಾಮದ ಜನರು ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಜಿಲ್ಲಾಧಿಕಾರಿ ಪ್ರಶಾಂತ್ ಮಿಶ್ರಾ, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೇರ್, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ, ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿ ರಾಘವೇಂದ್ರ ವರ್ಮಾ ಸೇರಿದಂತೆ ಇಲಾಖೆಯ ಸಿಬ್ಬಂದಿ ಹಾಗೂ ಇತರರು ಉಪಸ್ಥಿತರಿದ್ದರು.

**ಗಿಡಮರಗಳ ಬೆಳೆಸಿರಿ ಉತ್ತಮ ಪರಿಸರ ಕಾಪಾಡಿ**

## ಉದ್ಯಮ ಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮ: ಆಸಕ್ತರಿಂದ ಅರ್ಜಿ ಆಹ್ವಾನ

ಕೊಪ್ಪಳ: ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಮತ್ತು ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ, ಬೆಂಗಳೂರು ಇವರ ಪ್ರಾಯೋಜಕತ್ವದಲ್ಲಿ, ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ, ಕೊಪ್ಪಳ ಇವರ ವತಿಯಿಂದ ಸ್ವಯಂ ಉದ್ಯೋಗ ಪ್ರಾರಂಭಿಸುವ ನಿರುದ್ಯೋಗ ಪರಿಶಿಷ್ಟ ಜಾತಿಯ ಯುವತಿಯರಿಗೆ ಮತ್ತು ಉದ್ಯಮ ಆಕಾಂಕ್ಷಿಗಳಿಗೆ ಹತ್ತು ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಿದ್ದು, ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗದ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಮಾರುಕಟ್ಟೆ ಸಮೀಕ್ಷೆ, ಯೋಜನಾ ವರದಿ ತಯಾರಿಕೆ, ಹಾಗೂ ಉದ್ಯಮ ನಿರ್ವಹಣೆ, ಉದ್ಯಮಶೀಲತೆ, ಉದ್ಯಮ ಪ್ರಾರಂಭದ ಹಂತಗಳು, ಉದ್ಯಮಗಳನ್ನು ಪ್ರಾರಂಭಿಸಲು ಸರ್ಕಾರದ ಯೋಜನೆಗಳು, ಸಾಲ ಸೌಲಭ್ಯಗಳು, ಬ್ಯಾಂಕ್ ಬಗ್ಗೆ, ಜಾಹಿರಾತು ಮತ್ತು ಮಾರುಕಟ್ಟೆಯ ಕುರಿತು ನೋಂದಣೆ ಮಾಡುವ ವಿಧಾನಗಳು, ಯಶಸ್ವಿ ಉದ್ಯಮಿಗಳ ಜೊತೆ ಸಂವಾದ, ಉದ್ಯಮ ನಿರ್ವಹಣೆ ಮಾಡುವ ವಿಧಾನಗಳು ಮತ್ತು ಇತ್ಯಾದಿ ವಿಷಯಗಳ ಕುರಿತು ತರಬೇತಿಯನ್ನು ನೀಡಲಾಗುವುದು. ಇದಕ್ಕಾಗಿ ಕೊಪ್ಪಳ ಜಿಲ್ಲೆಯ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು 18 ರಿಂದ 45 ವರ್ಷ ವಯಸ್ಸಿನವರಾಗಿರಬೇಕು, ಎಸ್.ಎಸ್.ಎಲ್.ಸಿ. ಆಗಿರಬೇಕು. ಆಸಕ್ತರು ಕೊಪ್ಪಳ ನಗರಸಭೆ ಎದುರುಗಡೆ ಇರುವ ಜಿಲ್ಲಾ ಕೈಗಾರಿಕಾ ಕೇಂದ್ರ, ಸಿಡಾಕ್ ಜಂಟಿ ನಿರ್ದೇಶಕರ ಕಛೇರಿಗೆ ಆಧಾರ ಕಾರ್ಡ್, ಜಾತಿ ಪ್ರಮಾಣ ಪತ್ರ, ರೇಶನ್ ಕಾರ್ಡ್‌ಗಳ ಝರಾಕ್ಸ್ ಪ್ರತಿಗಳು ಹಾಗೂ 2 ಪಾಸಪೋರ್ಟ್ ಸೈಜ್ ಫೋಟೋಗಳೊಂದಿಗೆ ಜುಲೈ 16ರ ರೊಳಗೆ ಅರ್ಜಿಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 6362557332 ಅಥವಾ 7204016012 ಗೆ ಸಂಪರ್ಕಿಸಬಹುದು ಎಂದು ಕೊಪ್ಪಳ ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಮೀನು ಕೃಷಿಕರ ದಿನಾಚರಣೆ ಕಾರ್ಯಕ್ರಮ

ಕೊಪ್ಪಳ: ಕೊಪ್ಪಳ ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಮೀನುಗಾರಿಕೆ ಇಲಾಖೆಯ ವತಿಯಿಂದ ಗುರುವಾರದಂದು ಜಿಲ್ಲಾ ಕೃಷಿ ವಿಸ್ತರಣಾ ಕೇಂದ್ರದ ಸಭಾಂಗಣದಲ್ಲಿ ಮೀನು ಕೃಷಿಕರ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಮೀನು ಕೃಷಿಕರಿಗೆ ಈ ದಿನಾಚರಣೆಯ ಮಹತ್ವ ಮತ್ತು ಮೀನುಗಾರಿಕೆ ಬಗ್ಗೆ ಮಾಹಿತಿ ನೀಡಿ, 2024-25 ನೇ ಸಾಲಿನ Coffee Table Book ಎಂಬ ಇಲಾಖೆಯ ಕಿರು ಹೊತ್ತಿಗೆಯನ್ನು ಬಿಡುಗಡೆಗೊಳಿಸಲಾಯಿತು.

ಈ ಸಂದರ್ಭ ಜಂಟಿ ಕೃಷಿ ನಿರ್ದೇಶಕರಾದ ರುದ್ರೇಶಪ್ಪ, ಪಶು ಸಂಗೋಪನೆ ಇಲಾಖೆ ಉಪನಿರ್ದೇಶಕರಾದ ಡಾ.ಮಲ್ಲಯ್ಯ, ಕೊಪ್ಪಳ ಕೃಷಿ ವಿಸ್ತರಣಾ ಕೇಂದ್ರದ ಮುಂದಾಳು ಡಾ. ರವಿ, ಜಿಲ್ಲಾ ಪಂಚಾಯತ್ ಓಂಬುಡ್ಸ್‌ಮನ್ ವೀರಣ್ಣ ಕಮತರ್, ಜಿಲ್ಲಾ ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕ ಶ್ರೀನಿವಾಸ ಕುಲಕರ್ಣಿ, ಕೊಪ್ಪಳ ತಾಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕ ಬಸವರಾಜ್ ಪಾಟೀಲ್, ಗಂಗಾವತಿ ತಾಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕ ಆನಂದ್ ಪಾಟೀಲ್ ಹಾಗೂ ಮೀನುಗಾರಿಕೆ ಇಲಾಖೆಯ ಸಿಬ್ಬಂದಿ ವರ್ಗದವರು ಸೇರಿದಂತೆ ಜಿಲ್ಲೆಯ ವಿವಿಧ ಮೀನುಗಾರರ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು, ಮೀನುಗಾರರ ಸಹಕಾರ ಸಂಘದ ಸದಸ್ಯರು ಹಾಗೂ ಮೀನು ಕೃಷಿಕರು ಉಪಸ್ಥಿತರಿದ್ದರು.

ಮೊದಲ ಪುಟದಿಂದ....

ನೀಡುತ್ತೇವೆ ಎಂಬ ಆಶ್ವಾಸನೆ ನೀಡಿದರು. ಅಲ್ಲದೇ ನಾನು ಸದಾ ಪತ್ರಕರ್ತರಿಗೆ ಬೆನ್ನೆಲುಬಾಗಿ ಅವರ ಜೊತೆಗೆ ಇರುತ್ತೇನೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಹಿರಿಯ ಪತ್ರಕರ್ತ ವೀರನಗೌಡ ಪಟೇಲ್ ಮಾತನಾಡಿ, ಪತ್ರಿಕಾ ರಂಗ ಉಳಿಯಲು ನಿಷ್ಟುರ, ಪ್ರಾಮಾಣಿಕ ಪತ್ರಕರ್ತರು ಬೇಕು. ಇಂದು ಪತ್ರಕರ್ತರು ನೂರಾರು ಸಮಸ್ಯೆ ಎದುರಿಸುತ್ತಿದ್ದಾರೆ. ಅವರ ಸಾಮಾಜಿಕ ಜವಾಬ್ದಾರಿ ಅರಿತು ಸಮಾಜದ ಒಳಿತಿಗಾಗಿ ಶ್ರಮಿಸುತ್ತಿದ್ದಾರೆ. ಅವರ ಈ ದಿಟ್ಟತನ ಹೀಗೆ ಮುಂದುವರಿಯಬೇಕು ಎಂದರು. ಯಡಿಯೂರಪ್ಪ ಮುಖ್ಯಮಂತ್ರಿ ಆಗುವ ಮುನ್ನ ತಾಲ್ಲೂಕು ಪತ್ರಕರ್ತರಿಗೆ ಸರ್ಕಾರಿ ಜಾಹೀರಾತಿನಿಂದ ಕಮೀಶನ್ ಸಿಗುತ್ತಿತ್ತು. ಆದರೆ ಅವರು ಸಿಎಂ ಆದ ಬಳಿಕ ಅದನ್ನು ಸ್ಥಗಿತಗೊಳಿಸಲಾಯಿತು. ಮತ್ತೆ ಸರ್ಕಾರ ತಾಲ್ಲೂಕು, ಜಿಲ್ಲಾ ವರದಿಗಾರರ ಮೂಲಕ ಸರ್ಕಾರಿ ಜಾಹೀರಾತು ನೀಡುವಂತೆ ಆದರೆ ವರದಿಗಾರರು ನೆಮ್ಮದಿ ಜೀವನ ಕಂಡುಕೊಳ್ಳಬಹುದು ಎಂದರು ಎಂ.ಎಂ.ಜೆ. ಹರ್ಷವರ್ಧನ್ ಅವರು ಮಾತನಾಡಿ, ಪತ್ರಕರ್ತರ ಸಮಸ್ಯೆಗಳನ್ನು ಆಲಿಸಿ ಅದಕ್ಕೆ ಪೂರಕವಾಗಿ ಕೆಲಸ ಮಾಡುವಂತೆ ಶಾಸಕರಿಗೆ ಒತ್ತಾಯಿಸಿದರು. ಕಾಂಗ್ರೆಸ್ ಮುಖಂಡ ತಿಪ್ಪೇಸ್ವಾಮಿ ವೆಂಕಟೇಶ್ ಮಾತನಾಡಿ, ಪತ್ರಕರ್ತರಿಗೆ ರೂ. 10.00 ಲಕ್ಷಗಳ ವಿಮೆಯನ್ನು ಮಾಡಿಸಿಕೊಡುತ್ತೇನೆ. ಅಲ್ಲದೇ ಪತ್ರಿಕಾ ಭವನಕ್ಕೆ ಪ್ರತಿ ತಿಂಗಳು ಮಾಸಿಕ ಸಹಾಯಧನವನ್ನು ನೀಡುತ್ತೇನೆಂಬ ಆಶ್ವಾಸನೆ ನೀಡಿದರು. ಕರ್ನಾಟಕ ಪ್ರೆಸ್ ಕ್ಲಬ್ ರಾಜ್ಯಾಧ್ಯಕ್ಷ ಎಂ.ದಯಾನಂದ್ ಮಾತನಾಡಿ, ಮಾಧ್ಯಮಗಳು ಈ ಸಮಾಜದ ಮಹತ್ವದ ಸ್ತಂಭಗಳಾಗಿವೆ. ಮಾಧ್ಯಮವು ದೈನಂದಿನ ಆಗುಹೋಗುಗಳ ವರದಿ ನೀಡುವುದಲ್ಲದೇ ಸಮಾಜದ ಅಭಿಪ್ರಾಯಗಳನ್ನು ಎತ್ತಿಹಿಡಿಯುತ್ತದೆ. ಹೀಗಾಗಿ, ಪ್ರಜಾಪ್ರಭುತ್ವದಲ್ಲಿ ಮಾಧ್ಯಮವು ಪ್ರಮುಖ ಸ್ಥಾನ ಪಡೆದಿವೆ. ಆದರೆ ಪ್ರಸ್ತುತ ಕೆಲವು ಕಾರ್ಪೊರೇಟ್ ಸಂಸ್ಥೆಗಳು ಬಹುಪಾಲು ಹೂಡಿಕೆಯನ್ನು ಮಾಧ್ಯಮ ಸಂಸ್ಥೆಗಳಲ್ಲಿ ಹೂಡಿಕೆ ಮಾಡಿ ಪತ್ರಿಕಾ ಸ್ವಾತಂತ್ರ್ಯಕ್ಕೆ ಧ-ಕ್ಕೆ ಉಂಟುಮಾಡುತ್ತಿವೆ. ಹಾಗಾಗಿ ವೈಭವಿಕರಣ ತಾಂಡವಾಡುತ್ತಿದೆ ಎಂದರು. ಕರ್ನಾಟಕ ಪ್ರೆಸ್ ಕ್ಲಬ್ ಸಾಮಾಜಿಕ ಕೆಲಸಗಳಲ್ಲಿ ತನ್ನನ್ನು ತಾನು ತೊಡಗಿಸಿಕೊಂಡು ಪತ್ರಕರ್ತರ ಧ್ವನಿಯಾಗಿ ಕೆಲಸ ಮಾಡುತ್ತಿದೆ ಎಂದರು. ರಾಜ್ಯ ಉಪಾಧ್ಯಕ್ಷ ಕೊಟ್ರೇಶ್ ಮಾತನಾಡುತ್ತಾ, ಸಮಾಜದಲ್ಲಿ ಧ್ವನಿಯಿಲ್ಲದವರ ಪರವಾಗಿ ಧ್ವನಿ ಎತ್ತುವ ಬದ್ಧತೆಯನ್ನು ಇಟ್ಟುಕೊಂಡು ಕೆಲಸ ಮಾಡಬೇಕು ಎಂದರು. ಸಮಾಜದ ಸೇವೆಯಲ್ಲಿ ತೊಡಗಿರುವ ಪ್ರತಿಯೊಬ್ಬರನ್ನು ಗುರುತಿಸಿ ಅವರಿಗೆ ಪತ್ರಿಕಾ ದಿನಾಚರಣೆಯ ದಿನದಂದು ಸನ್ಮಾನಿಸುವುದರ ಮೂಲಕ ಪತ್ರಿಕಾ ದಿನಾಚರಣೆ ಆಚರಿಸಬೇಕು. ಪತ್ರಕರ್ತರಾದವರು ಜನರ ಸಮಸ್ಯೆಗಳನ್ನು ಸಮಾಜಕ್ಕೆ ತಲುಪಿಸುವುದು ಪತ್ರಕರ್ತರ ಆದ್ಯ ಕರ್ತವ್ಯ, ಸಂಘಟನೆ ಎನ್ನುವುದು ಪತ್ರಕರ್ತರಿಗೆ ಬಹಳ ಮುಖ್ಯ ಎಂದರು. ರಾಜ್ಯ ಕೋಶಧ್ಯಕ್ಷರು ಬಿಚ್ಚುಗತ್ತಿ ಕಾಜಾ ಹುಸೇನ್ ಮಾತನಾಡಿ ವಿವಿಧರಂಗಗಳಲ್ಲಿ ಸಾಧನೆಗೈದ ಮಹನೀಯರನ್ನು ಗುರುತಿಸಿ ಗೌರವಿಸುವಂತಹ ಕೆಲಸ ಮಾಡುತ್ತಿದೆ ಇದು ಜನಮುಕಿಯಾದ ಅತ್ಯಂತ ಸಂವೇದನಶೀಲವಾದಂತ ಕೆಲಸ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳು ಶಿಕ್ಷಕರು, ಪತ್ರಿಕಾ ವಿತರಕರು, ರೈತ ಸಂಘದ ಮುಖಂಡರು, ಕೃಷಿಕರು, ವಕೀಲರು, ಅಂಗನವಾಡಿ ಕಾರ್ಯಕರ್ತೆಯರು, ಬ್ಯಾಂಕ್ ಸಿಬ್ಬಂದಿ ವರ್ಗದ ಸಹಾಯಕರು, ಆರೋಗ್ಯ ಇಲಾಖೆ, ಆಟೋಚಾಲಕರು, ಅಗ್ನಿ ಶಾಮಕ ಇಲಾಖೆ ಸಿಬ್ಬಂದಿ, ಕ್ಷೌರಿಕ ವೃತ್ತಿಯವರು, ಗ್ರಂಥಾಲಯ ಮೇಲ್ವಿಚಾರಕರು, ಬೀದಿಬದಿ ವ್ಯಾಪಾರಸ್ಥರು, ಜೆಸ್ಕಾಂ ಇಲಾಖೆ ಸಿಬ್ಬಂದಿ, ಛಾಯಾಗ್ರಾಹಕರು, ಅಂಗನವಾಡಿ ಕಾರ್ಯಕರ್ತೆಯರು, ಹಿರಿಯ ಪತ್ರಕರ್ತರು, ಗಣ್ಯಮಾನ್ಯರು ಸೇರಿದಂತೆ 150 ಜನರಿಗೆ ವೇದಿಕೆಯ ಮೇಲೆ ಸನ್ಮಾನ ಮಾಡಿಸಿದರು. ಬೀದಿ ಬದಿ ವ್ಯಾಪಾರಿಗಳಿಗೆ, ಕಡುಬಡತನದಿಂದ ಜೀವನ ನಡೆಸುವವರ ಪರವಾಗಿ ವಿಧಾನಸೌಧದಲ್ಲಿ ದನಿ ಎತ್ತಿ ಅವರಿಗೆ ಸೂಕ್ತ ಸೌಲಭ್ಯಗಳನ್ನು ಒದಗಿಸುವಂತೆ ಶಾಸಕರಿಗೆ ಒತ್ತಾಯಿಸಿದರು.




**TUNGA KIRAN** kannada daily Morning Editor, Printer, Published & Owned By **PARASHURAM** word 12, No.25, Maruteshwara Nagar, Kanakagiri Road, GANGAVATHI-583227, Tq: Gangavathi, dist: Koppal, state: Karnataka, Printed at **Srishaila printer,** Old Sirigeri hospital, behand, Islampur, **GANGAVATHI**-583227, Tq: Gangavathi, dist: Koppal, state: Karnataka, e-mail: tungakiran2022@gmail.com RNI NO:KARKAN: 2022/82770